**All India Radio: Bangalore**
**National Bulletin In Kannada**
**12.09.2026 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**12.09.2026 1.10 p.m.**
**<><><><>**

ಮುಖ್ಯಾಂಶಗಳು

1. ದೆಹಲಿಯಲ್ಲಿ ಇಂದಿನಿಂದ ಎರಡು ದಿನ ೧೮ನೇ ಬ್ರಿಕ್ಸ್ ಶೃಂಗಸಭೆ; ರಷ್ಯಾ, ಚೀನಾ, ಸೇರಿ ಪ್ರಮುಖ ರಾಷ್ಟ್ರಗಳ ನಾಯಕರು ಭಾಗಿ
2. ಇಥಿಯೋಪಿಯಾ, ಮಲೇಷ್ಯಾ ಪ್ರಧಾನಿಗಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ; ಆರ್ಥಿಕ ಸಹಕಾರ, ರಕ್ಷಣೆ ಸೇರಿ ಹಲವು ವಿಚಾರಗಳ ಕುರಿತು ಚರ್ಚೆ
3. ಸೌದಿ ಅರೇಬಿಯಾದಿಂದ ಪೂರ್ವ- ಪಶ್ಚಿಮ ತೈಲ ಪೈಪ್ ಲೈನ್ ತಾತ್ಕಾಲಿಕ ಸ್ಥಗಿತ; ತೈಲ ಸರಬರಾಜಿಗೆ ಹೆಚ್ಚಿದ ಅಡಚಣೆ
4. ಯುಎಸ್ ಓಪನ್: ಮಹಿಳೆಯರ ಸಿಂಗಲ್ಸ್ ಫೈನಲ್‌ನಲ್ಲಿಂದು ಎಲೆನಾ ರಿಬಾಕಿನಾ-ಅರಿನಾ ಸಬಲೆಂಕಾ ಸೆಣಸು

<><><><>

೧೮ನೇ ಬ್ರಿಕ್ಸ್ ಶೃಂಗಸಭೆ ದೆಹಲಿಯ ಭಾರತ್ ಮಂಟಪದಲ್ಲಿ ಪ್ರಗತಿಯಲ್ಲಿದೆ. ಭಾರತ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ ಎರಡು ದಿನಗಳ ಈ ಕಾರ್ಯಕ್ರಮದಲ್ಲಿ ಬ್ರೆಜಿಲ್, ಚೀನಾ, ಈಜಿಪ್ಟ್, ಇಥಿಯೋಪಿಯಾ, ಇಂಡೋನೇಷ್ಯಾ, ಇರಾನ್, ರಷ್ಯಾ, ಸೌದಿ ಅರೇಬಿಯಾ, ದಕ್ಷಿಣ ಆಫ್ರಿಕಾ ಮತ್ತು ಯುಎಇ ಸೇರಿದಂತೆ ೧೧ ರಾಷ್ಟ್ರಗಳು ಪಾಲ್ಗೊಂಡಿವೆ. ಉನ್ನತ ಮಟ್ಟದ ಕಾರ್ಯಕ್ರಮದಲ್ಲಿ, ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ನಾಯಕರು ಜಾಗತಿಕ ಆಡಳಿತ, ಬಹುಪಕ್ಷೀಯತೆ, ವ್ಯಾಪಾರ ಮತ್ತು ಹೂಡಿಕೆ, ತಂತ್ರಜ್ಞಾನ, ಆಹಾರ ಮತ್ತು ಇಂಧನ ಭದ್ರತೆ, ಆರೋಗ್ಯ, ವಿಪತ್ತು ಸ್ಥಿತಿಸ್ಥಾಪಕತ್ವ ಹಾಗೂ ನಿರ್ಣಾಯಕ ಪೂರೈಕೆ ಸರಪಳಿಗಳು ಸೇರಿದಂತೆ ಪ್ರಮುಖ ವಿಷಯಗಳ ಬಗ್ಗೆ ಚರ್ಚಿಸುವ ನಿರೀಕ್ಷೆಯಿದೆ. 'ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಗಾಗಿ ನಿರ್ಮಾಣ" ಎಂಬ ಧ್ಯೇಯವಾಕ್ಯದೊಂದಿಗೆ ಈ ಶೃಂಗಸಭೆ ನಡೆಯುತ್ತಿದೆ. ಶೃಂಗಸಭೆಯಲ್ಲಿ ಹಲವು ಪ್ರಮುಖ ವಿಶ್ವ ನಾಯಕರು ಭಾಗವಹಿಸುತ್ತಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್, ದಕ್ಷಿಣ ಆಫ್ರಿಕಾ ಅಧ್ಯಕ್ಷ ಸಿರಿಲ್ ರಾಮಫೋಸಾ, ಈಜಿಪ್ಟ್ ಅಧ್ಯಕ್ಷ ಅಬ್ದೆಲ್ ಫತ್ತಾಹ್ ಎಲ್-ಸಿಸಿ, ಇಂಡೋನೇಷ್ಯಾ ಅಧ್ಯಕ್ಷ ಪ್ರಬೊವೊ ಸುಬಿಯಾಂಟೊ ಮತ್ತು ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯಾನ್ ಭಾಗವಹಿಸಿದ್ದಾರೆ. ಇಥಿಯೋಪಿಯಾ ಪ್ರಧಾನಿ ಡಾ.ಅಬಿ ಅಹ್ಮದ್ ಅಲಿ ಮತ್ತು ಅಬುಧಾಬಿಯ ರಾಜಕುಮಾರ ಶೇಖ್ ಖಾಲಿದ್ ಬಿನ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಕೂಡ ಶೃಂಗಸಭೆಯಲ್ಲಿ ಭಾಗವಹಿಸಿದ್ದಾರೆ. ಬ್ರೆಜಿಲ್ ಅನ್ನು ವಿದೇಶಾಂಗ ವ್ಯವಹಾರಗಳ ಸಚಿವ ಮೌರೊ ವಿಯೆರಾ ಪ್ರತಿನಿಧಿಸಿದ್ದು, ಸೌದಿ ಅರೇಬಿಯಾದ ವಿದೇಶಾಂಗ ಸಚಿವ ರಾಜಕುಮಾರ ಫೈಸಲ್ ಬಿನ್ ಫರ್ಹಾನ್ ಅಲ್ ಸೌದ್ ಕೂಡ ಭಾಗವಹಿಸಿದ್ದಾರೆ. 'ಅಂತರ್ಗತ ಜಾಗತಿಕ

ಆಡಳಿತ ಮತ್ತು ಬಹುಪಕ್ಷೀಯತೆಯನ್ನು ಬಲಪಡಿಸುವುದು" ಕುರಿತ ಮುಕ್ತಾಯದ ಅಧಿವೇಶನದೊಂದಿಗೆ ಶೃಂಗಸಭೆ ಪ್ರಾರಂಭಗೊಂಡಿದೆ. ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ನಾಯಕರು ಭಾರತ್ ಮಂಟಪದಲ್ಲಿ ಭಾರತ್ ಇನ್ನೋವೇಟ್ಸ್ ಪ್ರದರ್ಶನಕ್ಕೂ ಭೇಟಿ ನೀಡಲಿದ್ದಾರೆ. ಬಳಿಕ ಸಸಿ ನೆಡುವ ಕಾರ್ಯಕ್ರಮ ಮತ್ತು ಪ್ರಧಾನಿ ನರೇಂದ್ರ ಮೋದಿ ಆಯೋಜಿಸಿರುವ ಭೋಜನಕೂಟ ನಡೆಯಲಿದೆ. ಶೃಂಗದ ನೇಪಥ್ಯದಲ್ಲಿ ಬ್ರಿಕ್ಸ್ ನಾಯಕರೊಂದಿಗೆ ಪ್ರಧಾನಮಂತ್ರಿ ಅವರು ಸರಣಿ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಈ ಪೈಕಿ ಇವುಗಳಲ್ಲಿ ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್, ಅಬುಧಾಬಿ ಯುವರಾಜ, ಇಥಿಯೋಪಿಯಾ ಪ್ರಧಾನಿ, ಮಲೇಷ್ಯಾದ ಪ್ರಧಾನಿ ಅನ್ವರ್ ಇಬ್ರಾಹಿಂ ಮತ್ತು ವಿಯೆಟ್ನಾಂ ಪ್ರಧಾನಿ ಲೆ ಮಿನ್ಹ್ ಹಂಗ್ ಅವರೊಂದಿಗಿನ ಸಭೆಗಳು ಸೇರಿವೆ. ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲು ನವದೆಹಲಿಗೆ ಆಗಮಿಸಿದ್ದಾರೆ. ಶೃಂಗಸಭೆ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಜಿನ್ ಪಿಂಗ್ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ನಾಳೆ, ಪ್ರಧಾನಿ ಮೋದಿ ಅವರು ಸದಸ್ಯ ರಾಷ್ಟ್ರಗಳು ಮತ್ತು ಹತ್ತು ಪಾಲುದಾರ ರಾಷ್ಟ್ರಗಳ ನಾಯಕರನ್ನು ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆ: ಅಂತರ್ಗತ ಜಾಗತಿಕ ಬೆಳವಣಿಗೆಗಾಗಿ ಭವಿಷ್ಯವನ್ನು ರೂಪಿಸುವ ಕುರಿತ ಮುಕ್ತ ಅಧಿವೇಶನಕ್ಕೆ ಸ್ವಾಗತಿಸಲಿದ್ದಾರೆ. ಪಾಲುದಾರ ರಾಷ್ಟ್ರಗಳಾದ ಬೆಲಾರಸ್, ಬೊಲಿವಿಯಾ, ಕಜಕಿಸ್ತಾನ್, ಕ್ಯೂಬಾ, ಮಲೇಷ್ಯಾ, ನೈಜೀರಿಯಾ, ಥಾಯ್ಲೆಂಡ್, ಉಗಾಂಡಾ, ಉಜ್ಬೇಕಿಸ್ತಾನ್ ಮತ್ತು ವಿಯೆಟ್ನಾಂ ಕೂಡ ಶೃಂಗಸಭೆಯಲ್ಲಿ ಭಾಗವಹಿಸುತ್ತಿವೆ.

<><><><>

ನವದೆಹಲಿಯಲ್ಲಿ ನಡೆಯುತ್ತಿರುವ ೧೮ನೇ ಬ್ರಿಕ್ಸ್ ಶೃಂಗಸಭೆಯ ನೇಪಥ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಇಥಿಯೋಪಿಯಾದ ಪ್ರಧಾನಿ ಡಾ. ಅಬಿ ಅಹ್ಮದ್ ಅಲಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ದ್ವಿಪಕ್ಷೀಯ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಉಭಯ ನಾಯಕರು ಚರ್ಚೆ ನಡೆಸಿದರು ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಆರ್ಥಿಕ ಸಹಕಾರ, ರಕ್ಷಣೆ ಮತ್ತು ಭದ್ರತಾ ಪಾಲುದಾರಿಕೆ ಹಾಗೂ ಸಾಮರ್ಥ್ಯ ವರ್ಧನೆ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿನ ಪ್ರಗತಿಯನ್ನು ಉಭಯ ನಾಯಕರು ಪರಿಶೀಲಿಸಿದರು. ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ಬೆಳವಣಿಗೆಗಳ ದೃಷ್ಟಿಕೋನಗಳನ್ನು ವಿನಿಮಯ ಮಾಡಿಕೊಂಡರು. ಬಹುಪಕ್ಷೀಯ ವೇದಿಕೆಗಳಲ್ಲಿ ನಿಕಟ ಸಹಕಾರಕ್ಕೆ ತಮ್ಮ ಬದ್ಧತೆಯನ್ನು ಉಭಯ ನಾಯಕರು ಪುನರುಚ್ಚರಿಸಿದರು. ಸಭೆಯಲ್ಲಿ, ೧೮ ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಇಥಿಯೋಪಿಯಾದ ಭಾಗವಹಿಸುವಿಕೆಗೆ ಪ್ರಧಾನಿ ನರೇಂದ್ರ ಮೋದಿ ಮೆಚ್ಚುಗೆ ವ್ಯಕ್ತಪಡಿಸಿದರು ಮತ್ತು ಅದರ ಉಪಸ್ಥಿತಿಯು ಜಾಗತಿಕ ದಕ್ಷಿಣದ ಸಾಮೂಹಿಕ ಧ್ವನಿಯನ್ನು ಬಲಪಡಿಸಲು ಸಹಾಯ ಮಾಡಿದೆ ಎಂದು ಹೇಳಿದರು. ಭಾರತದ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ ಬ್ರಿಕ್ಸ್ ಶೃಂಗಸಭೆಯ ನೇಪಥ್ಯದಲ್ಲಿ ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ ಅವರೊಂದಿಗೂ ಪ್ರಧಾನಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಅಲ್ಲದೇ, ಪ್ರಧಾನಿ ನರೇಂದ್ರ ಮೋದಿ ಅವರು ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

<><><><>

ಪ್ರಧಾನ ಮಂತ್ರಿ ಆವಾಸ್ ಯೋಜನೆ-ನಗರ ೨.೦ ಅಡಿಯಲ್ಲಿ ಸರ್ಕಾರವು ೧೮ ಲಕ್ಷ ೭೭ ಸಾವಿರ ಮನೆಗಳನ್ನು ಅನುಮೋದಿಸಿದೆ. ಇದು ಯೋಜನೆಯ ಅನುಷ್ಠಾನಕ್ಕೆ ಮತ್ತಷ್ಟು ಉತ್ತೇಜನ ನೀಡುತ್ತದೆ ಮತ್ತು ನಗರ ಪ್ರದೇಶಗಳಲ್ಲಿ ಎಲ್ಲರಿಗೂ ವಸತಿ ಗುರಿಯನ್ನು ಪೂರೈಸಲಿದೆ. ಇತ್ತೀಚೆಗೆ ನವದೆಹಲಿಯಲ್ಲಿ ನಡೆದ ಕೇಂದ್ರ ಮಂಜೂರಾತಿ ಮತ್ತು ಮೇಲ್ವಿಚಾರಣಾ ಸಮಿತಿಯ ಒಂಬತ್ತನೇ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಸಭೆಯ ಅಧ್ಯಕ್ಷತೆಯನ್ನು ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯದ ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಸತೇಂದ್ರ ಸಿಂಗ್ ವಹಿಸಿದ್ದರು. ಸಭೆಯಲ್ಲಿ, ಪಿಎಂಎವೈ-ಯು ೨.೦ರ ಪಾಲುದಾರಿಕೆಯಲ್ಲಿ ಫಲಾನುಭವಿ ನೇತೃತ್ವದ ನಿರ್ಮಾಣ ಮತ್ತು ಕೈಗೆಟುಕುವ ವಸತಿ ವಿಭಾಗದ ಅಡಿಯಲ್ಲಿ ಸುಮಾರು ೨೯ ಸಾವಿರ ಹೆಚ್ಚುವರಿ ಮನೆಗಳನ್ನು ಅನುಮೋದಿಸಲಾಯಿತು. ಈ ಅನುಮೋದನೆಗಳು ಅಸ್ಸಾಂ, ಬಿಹಾರ, ಗುಜರಾತ್, ತೆಲಂಗಾಣ, ತ್ರಿಪುರಾ ಮತ್ತು ಉತ್ತರ ಪ್ರದೇಶ - ಆರು ರಾಜ್ಯಗಳನ್ನು ಒಳಗೊಂಡಿವೆ. ರಾಜ್ಯಗಳನ್ನು ಉದ್ದೇಶಿಸಿ ಮಾತನಾಡಿದ ಸಿಂಗ್, ಪಿಎಂಎವೈ-ಯು ೨.೦ದ ಸಮಯೋಚಿತ ಮತ್ತು ಪರಿಣಾಮಕಾರಿ ಅನುಷ್ಠಾನ ಹಾಗೂ ಮೇಲ್ವಿಚಾರಣೆಯನ್ನು ಖಚಿತಪಡಿಸಿಕೊಳ್ಳಲು ಸಂಘಟಿತ ಪ್ರಯತ್ನಗಳಿಗೆ ಕರೆ ನೀಡಿದರು. ಇದರಿಂದ ಯೋಜನೆಯ ಪ್ರಯೋಜನಗಳು ಎಲ್ಲಾ ಅರ್ಹ ಫಲಾನುಭವಿಗಳನ್ನು ತಲುಪುತ್ತವೆ ಎಂದರು.

<><><><>

ಪ್ರಧಾನಮಂತ್ರಿ ಕಿಸಾನ್ ಮಾನ್ ಧನ್ ಯೋಜನೆ - ಪಿಎಂ-ಕೆಎಂವೈ ಇಂದಿಗೆ ಏಳು ವರ್ಷಗಳನ್ನು ಪೂರೈಸಿದೆ. ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಯೋಜನೆಯನ್ನು ೨೦೧೯ರಲ್ಲಿ ಈ ದಿನದಂದು ಪ್ರಾರಂಭಿಸಲಾಯಿತು. ಯೋಜನೆಯಡಿ, ಅರ್ಹ ಭೂ ಹಿಡುವಳಿದಾರ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ೬೦ನೇ ವಯಸ್ಸಿನಿಂದ ಕನಿಷ್ಠ ಮೂರು ಸಾವಿರ ರೂಪಾಯಿಗಳ ಮಾಸಿಕ ಪಿಂಚಣಿಯನ್ನು ಖಾತರಿಪಡಿಸಲಾಗುತ್ತದೆ. ರೈತರಿಗೆ ಅವರ ವೃದ್ಧಾಪ್ಯದಲ್ಲಿ ಹೆಚ್ಚಿನ ಆರ್ಥಿಕ ಸ್ಥಿರತೆ ಮತ್ತು ಘನತೆ ಒದಗಿಸಲು ಪಿಂಚಣಿ ಯೋಜನೆಯನ್ನು ವಿನ್ಯಾಸಗೊಳಿಸಲಾಗಿದೆ. ಕಳೆದ ಏಳು ವರ್ಷಗಳಲ್ಲಿ, ಪಿಎಂ-ಕೆಎಂವೈ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಪ್ರಮುಖ ಸಾಮಾಜಿಕ ಭದ್ರತಾ ಕ್ರಮವಾಗಿ ಹೊರಹೊಮ್ಮಿದೆ, ಇದು ಅವರಿಗೆ ಹೆಚ್ಚಿನ ಆರ್ಥಿಕ ವಿಶ್ವಾಸದೊಂದಿಗೆ ತಮ್ಮ ಭವಿಷ್ಯವನ್ನು ಯೋಜಿಸಲು ನೆರವು ನೀಡುತ್ತದೆ.

<><><><>

ಸೌದಿ ಅರೇಬಿಯಾ ತನ್ನ ಪ್ರಮುಖ ಪೂರ್ವ-ಪಶ್ಚಿಮ ತೈಲ ಪೈಪ್ ಲೈನ್ ಅನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದೆ. ಈ ಸೌಲಭ್ಯವನ್ನು ಡ್ರೋನ್ ದಾಳಿಯಲ್ಲಿ ಗುರಿಯಾಗಿಸಿಕೊಂಡ ಒಂದು ದಿನದ ನಂತರ. ದೇಶದ ಇಂಧನ ಸಚಿವಾಲಯವು ಮುನ್ನೆಚ್ಚರಿಕೆ ಕ್ರಮ ಎಂದು ಬಣ್ಣಿಸಿದೆ. ಅಮೆರಿಕ ಮತ್ತು ಇಸ್ರೇಲ್ ನೊಂದಿಗಿನ ಇರಾನ್ ಯುದ್ಧದ ಸಮಯದಲ್ಲಿ ಹೋರ್ಮುಜ್ ಜಲಸಂಧಿಯ ಅಡಚಣೆ ನಂತರ ಸೌದಿ ಅರೇಬಿಯಾದ ತೈಲ ರಫ್ತು ಮುಂದುವರಿಸುವ ಸಾಮರ್ಥ್ಯದಲ್ಲಿ ಪೂರ್ವ-ಪಶ್ಚಿಮ ಪೈಪ್ ಲೈನ್ ಪ್ರಮುಖ ಪಾತ್ರ ವಹಿಸಿದೆ. ಇರಾಕ್ ನಿಂದ ಬಂದ ಹಲವಾರು ಡ್ರೋನ್ ಗಳು ಈ ದಾಳಿಗೆ ಕಾರಣವಾಗಿವೆ ಎಂದು ಸೌದಿ ವಿದೇಶಾಂಗ ಸಚಿವಾಲಯ ಆರೋಪಿಸಿದೆ. ಇರಾಕ್ ಸರ್ಕಾರವು ದಾಳಿಯನ್ನು ಖಂಡಿಸಿದ್ದು, ತನಿಖೆಗೆ ಆದೇಶಿಸಿದೆ. ಯೆಮೆನ್‌ನಲ್ಲಿ ಇರಾನ್ ಬೆಂಬಲಿತ ಹೌತಿ

ಬಂಡುಕೋರರು ಕೆಂಪು ಸಮುದ್ರದ ದಕ್ಷಿಣ ಪ್ರವೇಶದ್ವಾರದಲ್ಲಿರುವ ಬಾಬ್ ಎಲ್-ಮಂಡೆಬ್ ಜಲಸಂಧಿಯ ಮೋಖಾ ಬಂದರು ಮತ್ತು ಆಯಕಟ್ಟಿನ ದ್ವೀಪವಾದ ಪೆರಿಮ್‌ಅನ್ನು ವಶಪಡಿಸಿಕೊಂಡ ನಂತರ ಈ ಪೈಪ್‌ಲೈನ್ ಅನ್ನು ಸ್ಥಗಿತ ಗೊಳಿಸಲಾಗಿದೆ.

<><><><>

ನ್ಯೂಯಾರ್ಕ್‌ನಲ್ಲಿ ನಡೆಯುತ್ತಿರುವ ಯುಎಸ್ ಓಪನ್ ಟೆನಿಸ್ ಟೂರ್ನಿಯಲ್ಲಿ ೮ನೇ ಶ್ರೇಯಾಂಕಿತ ಬೆನ್ ಶೆಲ್ಟನ್ ಅವರು ಅಗ್ರ ಶ್ರೇಯಾಂಕಿತ ಅಲೆಕ್ಸಾಂಡರ್ ಜ್ವೆರೆವ್ ಅವರೊಂದಿಗೆ ಪುರುಷರ ಸಿಂಗಲ್ಸ್ ಪ್ರಶಸ್ತಿಗಾಗಿ ಹೋರಾಟ ನಡೆಸಲಿದ್ದಾರೆ. ಜರ್ಮನಿಯ ಜ್ವೆರೆವ್ ಅವರು ಇಂದು ಬೆಳಗ್ಗೆ ನಡೆದ ಮೊದಲ ಸೆಮಿಫೈನಲ್‌ನಲ್ಲಿ ಶ್ರೇಯಾಂಕ ರಹಿತ ರಷ್ಯಾದ ಆಟಗಾರ ಕರೆನ್ ಖಚನೊವ್ ಅವರನ್ನು ೬-೩, ೭-೬, ೭-೬ ಸೆಟ್‌ಗಳಿಂದ ಸೋಲಿಸಿದರು. ನಂತರ, ಮತ್ತೊಂದು ನಾಲ್ಕನೇ ಸುತ್ತಿನ ಪಂದ್ಯದಲ್ಲಿ ಬೆನ್ ಶೆಲ್ಟನ್, ೧೧ನೇ ಶ್ರೇಯಾಂಕಿತ ಫ್ರಾನ್ಸಿಸ್ ಟಿಯಾಫೋ ಅವರನ್ನು ೪-೬, ೬-೩, ೬-೩, ೭-೫ ರಿಂದ ಮಣಿಸಿದರು.  ಮಹಿಳೆಯರ ಸಿಂಗಲ್ಸ್ ವಿಭಾಗದಲ್ಲಿ ಹಾಲಿ ಚಾಂಪಿಯನ್ ಅರಿನಾ ಸಬಲೆಂಕಾ ಅವರು ಎರಡನೇ ಶ್ರೇಯಾಂಕಿತ ಎಲೆನಾ ರಿಬಾಕಿನಾ ಅವರನ್ನು ಎದುರಿಸಲಿದ್ದಾರೆ. ಅಗ್ರ ಶ್ರೇಯಾಂಕಿತ ಬೆಲರೂಸ್‌ನ ಸಬಲೆಂಕಾ ೭-೫, ೬-೨ ಸೆಟ್ ಗಳಿಂದ ಮೂರನೇ ಶ್ರೇಯಾಂಕಿತ ಅಮೆರಿಕದ ಜೆಸ್ಸಿಕಾ ಪೆಗುಲಾ ಅವರನ್ನು ಮಣಿಸಿದರೆ, ಸೆಮಿಫೈನಲ್‌ನಲ್ಲಿ ಕಜಕಿಸ್ತಾನದ ರಿಬಾಕಿನಾ ಅವರು ನಾಲ್ಕನೇ ಶ್ರೇಯಾಂಕಿತ ಕೊಕೊ ಗಾಫ್ ಅವರನ್ನು ಸೋಲಿಸಿದರು. ರಿಬಾಕಿನಾ ಮತ್ತು ಸಬಲೆಂಕಾ ೧೭ ಬಾರಿ ಮುಖಾಮುಖಿಯಾಗಿದ್ದಾರೆ, ಸಬಲೆಂಕಾ ತಮ್ಮ ಜಯಾಪಜಯ ದಾಖಲೆಯಲ್ಲಿ ೧೦-೭ ಮುನ್ನಡೆ ಸಾಧಿಸಿದ್ದಾರೆ. ಗ್ರ್ಯಾನ್ ಸ್ಲಾಮ್ ಫೈನಲ್‌ನಲ್ಲಿ, ಇಬ್ಬರೂ ಈಗ ಮೂರನೇ ಬಾರಿ ಎದುರಾಗುತ್ತಿದ್ದಾರೆ.

<><><><>

ಚೀನಾದಲ್ಲಿ ನಡೆಯುತ್ತಿರುವ ಮಹಿಳೆಯರ ಜೂನಿಯರ್ ಏಷ್ಯಾ ಕಪ್ ಹಾಕಿ ಟೂರ್ನಿಯಲ್ಲಿ ಭಾರತ ಮಹಿಳಾ ತಂಡ ೫-೧ ಗೋಲ್ ಗಳ ಅಂತರದಿಂದ ದಕ್ಷಿಣ ಕೊರಿಯಾ ತಂಡವನ್ನು ಮಣಿಸಿ ಫೈನಲ್ ಪ್ರವೇಶಿಸಿದೆ. ಭಾರತ ತಂಡ ಪ್ರಶಸ್ತಿಗಾಗಿ ಚೀನಾ ಮತ್ತು ಜಪಾನ್ ನಡುವಿನ ಎರಡನೇ ಸೆಮಿಫೈನಲ್ ವಿಜೇತರನ್ನು ಎದುರಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>